# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1115 (1370)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಉಡುಪಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರದ ಕಟ್ಟಡದ ಕಾಮಗಾರಿ ಕುರಿತು

(ಅ) ಉಡುಪಿ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಕಟ್ಟಡವನ್ನು ಯಾವಾಗ ನಿರ್ಮಿಸಲಾಗಿದೆ; ಕಾಮಗಾರಿಯನ್ನು ಕೈಗೊಂಡ ಇಲಾಖೆ ಯಾವುದು; ಗುತ್ತಿಗೆದಾರರ ಹೆಸರು ಮತ್ತು ವಿಳಾಸ ನೀಡುವುದು; ಈ ಕಟ್ಟಡದ ನಿರ್ಮಾಣಕ್ಕೆ ತಗುಲಿದ ವೆಚ್ಚವೆಷ್ಟು; ಸದರಿ ಕಟ್ಟಡವನ್ನು ಯಾವ ಇಲಾಖೆಯಿಂದ ನಿರ್ವಹಣೆ ಮಾಡಲಾಗುತ್ತಿದೆ; (ಮಾಹಿತಿ ಒದಗಿಸುವುದು)

(ಆ) ಸದರಿ ಕಟ್ಟಡದ ಮೊದಲ ಮಹಡಿಯ ಕಾಮಗಾರಿಯ ಕಟ್ಟಡವನ್ನು ಯಾವಾಗ ನಿರ್ಮಿಸಲಾಗಿದೆ; ಕಾಮಗಾರಿಯನ್ನು ಕೈಗೊಂಡ ಇಲಾಖೆ ಯಾವುದು; ಗುತ್ತಿಗೆದಾರರ ಹೆಸರು ಮತ್ತು ವಿಳಾಸ ನೀಡುವುದು; ಈ ಮೊದಲ ಮಹಡಿಯ ಕಟ್ಟಡ ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನದ ಮೊತ್ತ ಮತ್ತು ಬಳಕೆಯಾದ ಮೊತ್ತವೆಷ್ಟು; (ವಿವರ ಒದಗಿಸುವುದು)

(ಇ) ಸದರಿ ಕಟ್ಟಡದ ಮೊದಲ ಮಹಡಿ ನಿರ್ಮಾಣ ಕಾಮಗಾರಿ ಸಂಪೂರ್ಣಗೊಳ್ಳದಿರುವುದರಿಂದ ಆಯೋಗದ ಅಧ್ಯಕ್ಷರು, ಸದಸ್ಯರು, ಸಿಬ್ಬಂದಿ ವರ್ಗ, ಪಕ್ಷಗಾರರು ಮತ್ತು ವಕೀಲರಿಗೆ ಸ್ಥಳಾವಕಾಶದ ಕೊರತೆ ಉಂಟಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮವೇನು; ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು?